ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	618
ಸದಸ್ಯರ ಹೆಸರು	:	ಶ್ರೀ ಅರುಣ ಶಹಾಪುರ(ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	:	04/03/2021
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

	ಪ್ರಶ್ನೆ	ಉತ್ತರ
(ಅ)	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಭಾಷಾ ಅಲ್ಪಸಂಖ್ಯಾತ ಶಾಲೆಗಳಲ್ಲಿ ರೋಸ್ಟರ್ ನಿಯಮಗಳ ವಿನಾಯಿತಿ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಅಭಿಪ್ರಾಯ ಕೋರಿ ಬಂದಿರುವ ಪ್ರಸ್ತಾವನೆಯ(ಇಡಿ 33 ಎಸ್ಎಂಸಿ 2012) ಕುರಿತು ಸಿಆಸುಇ ಇಲಾಖೆಯ ಸ್ಪಷ್ಟ ಅಭಿಪ್ರಾಯ ಏನು;	ಸಿಆಸುಇ (ಸೇವಾ ನಿಯಮಗಳು-1) ರವರು ಭಾಷಾ ಅಲ್ಪ ಸಂಖ್ಯಾತರು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿ ನಿಯಮಗಳನ್ನು ಪಾಲಿಸುವ ಬಗ್ಗೆ ಕಡತ ಸಂಖ್ಯೆ: ಇಡಿ 33 ಎಸ್ಎಂಸಿ 2012 ದಿನಾಂಕ:19/01/2021ರಲ್ಲಿ ಈ ಕೆಳಗಿನಂತೆ ಅಭಿಪ್ರಾಯಿಸಿರುತ್ತಾರೆ. "ಕರ್ನಾಟಕ ರಾಜ್ಯದಲ್ಲಿ ಭಾಷಾ ಅಲ್ಪಸಂಖ್ಯಾತರು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳನ್ನು ಭಾಷಾ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂದು ಘೋಷಿಸುವ ಮುನ್ನ ಮೀಸಲಾತಿ ನಿಯಮಗಳನ್ನು ಪಾಲಿಸುವ ಬಗ್ಗೆ. ಜಿಜ್ಞಾಸೆ ಉಂಟಾದ ಕಾರಣದಿಂದಾಗಿ, ಈ ವಿಷಯವನ್ನು ದಿನಾಂಕ:18/04/2005 ರಂದು ನಡೆದ ಸಚಿವ ಸಂಪುಟದ ಉಪ ಸಮಿತಿಯ ಮುಂದೆ ತರಲಾಗಿದ್ದು, ಭಾಷಾ ಅಲ್ಪಸಂಖ್ಯಾತರ ಅನುದಾನಿತ ಶಾಲೆಗಳಲ್ಲಿ ಮೀಸಲಾತಿ ನಿಯಮವನ್ನು ಅಳವಡಿಸತಕ್ಕದೆಂದು ನಿರ್ಣಯಿಸಿರುವ ಹಿನ್ನೆಲೆಯಲ್ಲಿ ಭಾಷಾ ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆಗಳು ಕಡ್ಡಾಯವಾಗಿ ಮೀಸಲಾತಿ ನಿಯಮಗಳನ್ನು ಪಾಲಿಸತಕ್ಕದೆಂದು ಸರ್ಕಾರವು ತೀರ್ಮಾನಿಸಿದೆ" ಈ ಹಿನ್ನೆಲೆಯಲ್ಲಿ ಆಡಳಿತ ಇಲಾಖೆಯು ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:9744/2012 (ಇಡಿಎನ್-ಆರ್ಇಜಿ-ಪಿ) ರಲ್ಲಿ ದಿನಾಂಕ:25.10.2013 ರಂದು ನೀಡಿರುವ ನಿರ್ದೇಶನದ ಹಿನ್ನೆಲೆಯಲ್ಲಿ ಪ್ರಸ್ತಾವನೆಯ ಕುರಿತು ಸಮಾಜ ಕಲ್ಯಾಣ ಇಲಾಖೆಯೊಂದಿಗೆ ಸಮಾಲೋಚಿಸಿ ಸಚಿವ ಸಂಪುಟದ ಮುಂದೆ ಮಂಡಿಸಲು ಸೂಕ್ತ ಕ್ರಮ ವಹಿಸುವಂತೆ ಸಿಆಸು ಇಲಾಖೆಯು ಅಭಿಪ್ರಾಯ ನೀಡಿದ್ದು, ಅದರಂತೆ ಪರಿಶೀಲಿಸಲಾಗುತ್ತಿದೆ.

(ಆ)	ಭಾಷಾ ಅಲ್ಪ ಸಂಖ್ಯಾತ ಶಾಲಾ ಕಾಲೇಜುಗಳಲ್ಲಿ ಪಾಲಿಸಬಹುದಾದ ಅಥವಾ ಪ್ರಸ್ತುತ ಇರುವ ನಿಯಮಾವಳಿಗಳೇನು? (ಸಂಪೂರ್ಣ ವಿವರ ನೀಡುವುದು)	ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ61ಎಸ್‌ಎಂಸಿ2009 ದಿನಾಂಕ: 03/09/2010 ರಲ್ಲಿ ಭಾಷಾ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ಕಡ್ಡಾಯವಾಗಿ ಮೀಸಲಾತಿ (ರೋಸ್ಟರ್) ನಿಯಮಗಳನ್ನು ಪಾಲಿಸತಕ್ಕದ್ದೆಂದು ತೀರ್ಮಾನಿಸಿದೆ. (ಅನುಬಂಧ ಲಗತ್ತಿಸಿದೆ)

(ಎಸ್.ಸುರೇಶ್‌ಕುಮಾರ್)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಇಪಿ 8 ಪಿಡಿಬಿ 2021

47 Annexure-J 6

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 61 ಎಸ್‌ಎಂಎ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:03-09-2010.

ಅಧಿಸೂಚನೆ

ಕರ್ನಾಟಕ ರಾಜ್ಯದಲ್ಲಿ ಭಾಷಾ ಅಲ್ಪ ಸಂಖ್ಯಾತರುಗಳು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳನ್ನು ಭಾಷಾ ಅಲ್ಪ ಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂದು ಘೋಷಿಸುವ ಮುನ್ನ ಮೀಸಲಾತಿ ನಿಯಮಗಳನ್ನು ಪಾಲಿಸುವ ಬಗ್ಗೆ ಜಿಜ್ಞಾಸೆ ಉಂಟಾದ ಕಾರಣದಿಂದಾಗಿ, ಈ ವಿಷಯವನ್ನು ದಿನಾಂಕ 18-04-2005 ರಂದು ನಡೆದ ಸಚಿವ ಸಂಪುಟದ ಉಪ ಸಮಿತಿಯ ಮುಂದೆ ತರಲಾಗಿದ್ದು, ಭಾಷಾ ಅಲ್ಪಸಂಖ್ಯಾತರ (Linguistic Minority Institutions) ಅನುದಾನಿತ ಶಾಲೆಗಳಲ್ಲಿ ಮೀಸಲಾತಿ ನಿಯಮವನ್ನು ಅಳವಡಿಸತಕ್ಕದ್ದೆಂದು ನಿರ್ಣಯಿಸಿರುವ ಹಿನ್ನೆಲೆಯಲ್ಲಿ ಭಾಷಾ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ಕಡ್ಡಾಯವಾಗಿ ಮೀಸಲಾತಿ ನಿಯಮಗಳನ್ನು ಪಾಲಿಸತಕ್ಕದ್ದೆಂದು ಸರ್ಕಾರವು ತೀರ್ಮಾನಿಸಿದೆ.

ಕರ್ನಾಟಕ ರಾಜ್ಯದಲ್ಲಿನ ಮತೀಯ ಅಲ್ಪಸಂಖ್ಯಾತ ಸಂಸ್ಥೆಗಳನ್ನು ಘೋಷಿಸುವ ರೀತಿಯಲ್ಲಿಯೇ ಭಾಷಾ ಅಲ್ಪ ಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂದು ಘೋಷಿಸುವ ಪ್ರಸ್ತಾವನೆಗಳನ್ನು ಸಂಬಂಧಿಸಿದ ಆಯಾಯ ಆಯುಕ್ತಾಲಯದ ಮಟ್ಟದಲ್ಲಿಯೇ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಕೆಳಕಂಡಂತೆ ಅಧಿಕಾರವನ್ನು ಪ್ರತ್ಯಾಯೋಜಿಸಲು ಸರ್ಕಾರವು ತೀರ್ಮಾನಿಸಿರುತ್ತದೆ.

ಪ್ರಾಥಮಿಕ ಹಾಗೂ ಪ್ರೌಢಶಾಲೆಗಳು:

i) ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.	.....	ಬೆಂಗಳೂರು ವಲಯದ ಪ್ರಾಥಮಿಕ ಪ್ರೌಢ ಶಿಕ್ಷಣ ಸಂಸ್ಥೆಗಳು
ii) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ	.....	ವಾಯುವ್ಯ ವಲಯದ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಂಸ್ಥೆಗಳು
iii) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ	.....	ಈಶಾನ್ಯ ವಲಯದ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಂಸ್ಥೆಗಳು
iv) ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ	.....	ಪದವಿ ಪೂರ್ವ ಶಿಕ್ಷಣ ಕಾಲೇಜುಗಳು

48

ಅದರಂತೆ ಆಯಾ ಆಯುಕ್ತರ ಕಛೇರಿಯಲ್ಲಿ ಸಂಬಂಧಿಸಿದ ಆಯುಕ್ತರು ಅಧ್ಯಕ್ಷರಾಗಿ, ಸಂಬಂಧಿಸಿದ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಸಂಬಂಧಿಸಿದ ಜಂಟಿ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರು ಸದಸ್ಯ ಕಾರ್ಯದರ್ಶಿ ಎಂದು ಈ ಕೆಳಕಂಡಂತೆ ಪರಿಶೀಲನಾ ಸಮಿತಿಯನ್ನು ರಚಿಸಲು ಈ ಮೂಲಕ ಆದೇಶಿಸಲಾಗಿದೆ.

<u>ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.</u>

ಆಯುಕ್ತರು	.....	ಅಧ್ಯಕ್ಷರು
ನಿರ್ದೇಶಕರು (ಪ್ರಾಥಮಿಕ)	.....	ಸದಸ್ಯರು
ನಿರ್ದೇಶಕರು, ಉರ್ದು ಮತ್ತು ಇತರೆ ಭಾಷಾ ಅಲ್ಪ ಸಂಖ್ಯಾತ ಶಾಲೆಗಳು	.....	ಸದಸ್ಯ ಕಾರ್ಯದರ್ಶಿ

<u>ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.</u>

ಅಪರ ಆಯುಕ್ತರು	.....	ಅಧ್ಯಕ್ಷರು
ನಿರ್ದೇಶಕರು	.....	ಸದಸ್ಯರು
ಜಂಟಿ ನಿರ್ದೇಶಕರು	.....	ಸದಸ್ಯ ಕಾರ್ಯದರ್ಶಿ

<u>ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ.</u>

ಅಪರ ಆಯುಕ್ತರು	.....	ಅಧ್ಯಕ್ಷರು
ನಿರ್ದೇಶಕರು	.....	ಸದಸ್ಯರು
ಜಂಟಿ ನಿರ್ದೇಶಕರು	.....	ಸದಸ್ಯ ಕಾರ್ಯದರ್ಶಿ

ಭಾಷಾ ಅಲ್ಪ ಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂದು ಘೋಷಿಸುವ ಸಂದರ್ಭದಲ್ಲಿ ರೋಸ್ಟರ್ ಪದ್ಧತಿ ಪಾಲಿಸುವ ಷರತ್ತನ್ನು ವಿಧಿಸುವುದು ಹಾಗೂ ದಿನಾಂಕ:20-07-2004ರ ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 5 ಎಸ್‌ಎಂಸಿ 2002 ಹಾಗೂ ದಿನಾಂಕ:12-12-2006ರ ಸುತ್ತೋಲೆ ಸಂಖ್ಯೆ:ಇಡಿ 22 ಎಂಪಿಎಸ್ 2006 ರಲ್ಲಿ ನಿಗದಿಪಡಿಸಿರುವ ಮಾರ್ಗಸೂಚಿಗಳನ್ವಯ ಪ್ರಸ್ತಾವನೆಗಳನ್ನು ಪರಿಶೀಲಿಸಿ ಭಾಷಾ ಅಲ್ಪ ಸಂಖ್ಯಾತರುಗಳು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳನ್ನು ಭಾಷಾ ಅಲ್ಪ ಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂದು ಘೋಷಿಸಲು ಕಂಡಿಕೆ-2 ರಲ್ಲಿ ಸೂಚಿಸಿರುವ ರೀತಿಯಲ್ಲಿ ಅಧಿಕಾರ ಪ್ರತ್ಯಾಯೋಜಿಸಿದೆ.

49

ಬಿ.ಎಡ್. ಕಾಲೇಜುಗಳಿಗೆ ಸಂಬಂಧಪಟ್ಟಂತೆ ಭಾಷಾ ಅಲ್ಪ ಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂದು ಘೋಷಿಸುವ ಬಗ್ಗೆ ಸರ್ಕಾರದ ಹಂತದಲ್ಲಿಯೇ ಕ್ರಮ ತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
(ಎಸ್.ಹೆಚ್. ಕುರಿಯವರ್) 3/09/10
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಸಮಿತಿಗಳು).

ಇವರಿಗೆ,

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಗುಲ್ಬರ್ಗಾ.
4. ನಿರ್ದೇಶಕರು, ಉರ್ದು ಮತ್ತು ಇತರೆ ಭಾಷಾ ಅಲ್ಪ ಸಂಖ್ಯಾತ ಶಾಲೆಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಸಂಬಂಧಿಸಿದ ಎಲ್ಲಾ ಜಂಟಿ ನಿರ್ದೇಶಕರುಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, (ನಿರ್ದೇಶಕರು, ಉರ್ದು ಮತ್ತು ಇತರೆ ಭಾಷಾ ಅಲ್ಪ ಸಂಖ್ಯಾತ ಶಾಲೆಗಳು ಇವರ ಮುಖಾಂತರ).
6. ಸಂಬಂಧಿಸಿ ಎಲ್ಲಾ ಉಪ ನಿರ್ದೇಶಕರುಗಳು, (ನಿರ್ದೇಶಕರು, ಉರ್ದು ಮತ್ತು ಇತರೆ ಭಾಷಾ ಅಲ್ಪ ಸಂಖ್ಯಾತ ಶಾಲೆಗಳು ಇವರ ಮುಖಾಂತರ).
   ಸಂಬಂಧಿಸಿದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು (ನಿರ್ದೇಶಕರು, ಉರ್ದು ಮತ್ತು ಇತರೆ ಭಾಷಾ ಅಲ್ಪ ಸಂಖ್ಯಾತ ಶಾಲೆಗಳು ಇವರ ಮುಖಾಂತರ).

ಪ್ರತಿ ಮಾಹಿತಿಗಾಗಿ:-

1) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಉಪ ಕಾರ್ಯದರ್ಶಿಗಳು (ಆಡಳಿತ)/(ಸೇವೆಗಳು), ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ ಇವರ ಆಪ್ತ ಸಹಾಯಕರು.
4) ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ (ಅಲ್ಪ ಸಂಖ್ಯಾತ).
6) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

This [illegible] is referred to
as Annexure........J..........in the
Affidavit of Shri / Smt. T. L. R...
Oath Commissioner